ಕರ್ನಾಟಕ ಸಮುದಾಯ ಆಧಾರಿತ (ಜೆ.ಎಸ್.ವೈ.ಎಸ್) ಕೆರೆ ನಿರ್ವಹಣೆ ಯೋಜನೆ	20000.00
ಕೃಷಿಗೆ ನೇರವಾಗಿ ಸಂಬಂಧಿಸಿದ ನೀರಾವರಿ ಯೋಜನೆಗಳ ದುರಸ್ತಿ, ನವೀಕರಣ ಹಾಗೂ ಪುನರುಜ್ಜೀವನ (ಆರ್.ಆರ್.ಆರ್)	5652.56

ಇದಲ್ಲದೇ 2011–12 ರಿಂದ 2014–2015ನೇ ಸಾಲಿನಲ್ಲಿ ಕೆರೆಗಳ ಅಭಿವೃದ್ಧಿ ಕಾರ್ಯವನ್ನು ಕೈಗೊಳ್ಳಲು 13ನೇ ಹಣಕಾಸು ಆಯೋಗದಿಂದ ರೂ.350.00 ಕೋಟಿಗಳು ಅನುದಾನವು ಲಭ್ಯವಾಗಲಿದೆ.

ಡಿ) 2010–11ನೇ ಸಾಲಿನಲ್ಲಿ ರೂ.222.99 ಲಕ್ಷ ಅಂದಾಜು ಮೊತ್ತದ 7 ಕೆರೆಗಳ ಅಭಿವೃದ್ಧಿ ಕಾಮಗಾರಿಗಳನ್ನು ಕೈಗೆತ್ತಿಕೊಂಡಿದ್ದು, 6 ಕೆರೆಗಳನ್ನು ಅಭಿವೃದ್ಧಿಪಡಿಸಲಾಗಿದೆ.

ಕರ್ನಾಟಕ ಸಮುದಾಯ ಆಧಾರಿತ ಕೆರೆ ನಿರ್ವಹಣೆ ಯೋಜನೆಯಡಿಯಲ್ಲಿ 47 ಕೆರೆಗಳ ಅಭಿವೃದ್ಧಿಪಡಿಸಲು ತೆಗೆದುಕೊಳ್ಳಲಾಗಿದೆ. ರೂ.11.46 ಕೋಟಿ ನಿಗದಿಪಡಿಸಲಾಗಿದೆ.

ಅಂತರ್ಜಲದ ಮಟ್ಟ ಕುಸಿತ

35(335) ಶ್ರೀ ಬಚ್ಚೇಗೌಡ ಕೆ.ಪಿ. (ಚಿಕ್ಕಬಳ್ಳಾಪುರ) ಮಾನ್ಯ ಸಣ್ಣ ನೀರಾವರಿ, ಕನ್ನಡ ಮತ್ತು ಸಂಸ್ಕೃತಿ ಹಾಗೂ ಜವಳಿ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಚಿಕ್ಕಬಳ್ಳಾಪುರ ಮತ್ತು ಕೋಲಾರ ಜಿಲ್ಲೆಗಳಲ್ಲಿ ಅಂತರ್ಜಲದ ಮಟ್ಟ 1000 ದಿಂದ 1200 ಅಡಿಗಳಿಗೆ ಕುಸಿದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

ಆ) ಹಾಗಿದ್ದಲ್ಲಿ, ಈ ಅಂತರ್ಜಲದ ಮಟ್ಟವನ್ನು ಅಭಿವೃದ್ಧಿಪಡಿಸಿ ಕಾಪಾಡಿ ಕೊಳ್ಳಲು ಸರ್ಕಾರ ಕೈಗೊಂಡಿರುವ ಕ್ರಮಗಳೇನು;

ಇ) ಈ ಎರಡೂ ಜಿಲ್ಲೆಗಳಲ್ಲಿ ಶಾಶ್ವತ ನದಿ ನಾಲೆಗಳಿಲ್ಲದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

ಈ) ಹಾಗಿದ್ದಲ್ಲಿ, ಈ ಜಿಲ್ಲೆಗಳಿಗೆ ನೀರಾವರಿ ಯೋಜನೆಗಳನ್ನು ಕಲ್ಪಿಸುವ ಪ್ರಸ್ತಾವನೆ ಸರ್ಕಾರದ ಮುಂದಿದೆಯೇ;

ಉ) ಹಾಗಿದ್ದಲ್ಲಿ, ಕಲ್ಪಿಸಲಾಗುವ ಯೋಜನೆಗಳು ಯಾವುವು ಮತ್ತು ಈ ಯೋಜನೆಗಳಿಗಾಗಿ ಸರ್ಕಾರ ನಿಗದಿಪಡಿಸಿರುವ ಮೊತ್ತ ಎಷ್ಟು; (ವಿವರಗಳನ್ನು ನೀಡುವುದು)?

ಶ್ರೀ ಗೋವಿಂದ ಎಂ. ಕಾರಜೋಳ (ಸಣ್ಣ ನೀರಾವರಿ, ಕನ್ನಡ ಮತ್ತು ಸಂಸ್ಕೃತಿ ಹಾಗೂ ಜವಳಿ ಸಚಿವರು)

ಅ) ಹೌದು.

ಆ) ಅಂತರ್ಜಲ ಅಭಿವೃದ್ಧಿಪಡಿಸಲು ಕೆಳಕಂಡ ಕ್ರಮಗಳನ್ನು ಕೈಗೊಳ್ಳಲಾಗಿದೆ;

1) ಅಂತರ್ಜಲ ಅತಿಬಳಕೆ/ಕ್ಲಿಷ್ಟಕರ ಪ್ರದೇಶಗಳಲ್ಲಿ, ಜನ ಜಾಗೃತಿ ಶಿಬಿರಗಳನ್ನು ಆಯೋಜಿಸಿ, ಅಂತರ್ಜಲ ಅತಿಬಳಕೆಯ ಪರಿಣಾಮಗಳು, ಮಳೆ ನೀರಿನ ಸಂಗ್ರಹಣೆ ಮತ್ತು ಮರು ಬಳಕೆ ಹಾಗೂ ಅಂತರ್ಜಲದ ಸದ್ಬಳಕೆ ಬಗ್ಗೆ ಅರಿವು ಮೂಡಿಸಲಾಗುತ್ತಿದೆ.

2) ಸಣ್ಣ ನೀರಾವರಿ, ಕೃಷಿ ಹಾಗೂ ಗ್ರಾಮೀಣ ಅಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆಗಳ ವತಿಯಿಂದ ಮಳೆ ನೀರನ್ನು ಸಂಗ್ರಹಿಸಿ ಭೂಮಿಗೆ ಇಂಗಿಸಿ ಅಂತರ್ಜಲ ಹೆಚ್ಚಳ ಮಾಡುವ ನಿಟ್ಟಿನಲ್ಲಿ ಅಂತರ್ಜಲ ಕೃತಕ ಮರುಪೂರ್ಯೆಕೆ ರಚನೆಗಳನ್ನು ನಿರ್ಮಿಸಲಾಗುತ್ತಿದೆ.

3) ಅನಿರ್ಬಂಧಿತ ಅಂತರ್ಜಲ ಅತಿಬಳಕೆಯನ್ನು ನಿಯಂತ್ರಿಸಿ ಅಂತರ್ಜಲ ಅಭಿವೃದ್ಧಿಪಡಿಸಲು, ಕರ್ನಾಟಕ ಅಂತರ್ಜಲ (ಅಭಿವೃದ್ಧಿ ಮತ್ತು ನಿರ್ವಹಣೆಯ ವಿನಿಯಮನ ಹಾಗೂ ನಿಯಂತ್ರಣ) ವಿಧೇಯಕ 2010ನ್ನು ಸಚಿವ ಸಂಪುಟವು ಅನುಮೋದಿಸಿದ್ದು, ವಿಧಾನಮಂಡಲದ ಅನುಮೋದನೆ ಪಡೆದ ನಂತರ, ನೂತನವಾಗಿ ರಚಿತವಾಗುವ 'ಕರ್ನಾಟಕ ಅಂತರ್ಜಲ ಪ್ರಾಧಿಕಾರ'ವು ಸೂಕ್ತ ಕಾನೂನುಗಳನ್ನು ಜಾರಿಗೊಳಿಸಿ ಅಂತರ್ಜಲ ಅಭಿವೃದ್ಧಿ ಬಗ್ಗೆ ಇನ್ನು ಹೆಚ್ಚಿನ ಕ್ರಮಕೈಗೊಳ್ಳಲಾಗುವುದು.

ಇ) ಬಂದಿದೆ.

ಈ) ಕೆರೆ ತುಂಬಿಸುವ ಯೋಜನೆಗಳನ್ನು ರೂಪಿಸಲಾಗುತ್ತಿದೆ.

ಉ) ಭದ್ರಾ ಮೇಲ್ದಂಡೆ ಯೋಜನೆಯಡಿ ಕೋಲಾರ ತಾಲ್ಲೂಕಿನ 19 ಸಣ್ಣ ನೀರಾವರಿ ಕೆರೆಗಳಿಗೆ ನೀರನ್ನು ತುಂಬಿಸುವ ಯೋಜನೆಯಿದ್ದು, ಇದರ ಸರ್ವೆ ಕಾರ್ಯವನ್ನು ಪೂರ್ಣಗೊಳಿಸಿ, ರೂ. 10.09 ಕೋಟಿಗೆ ಅಂದಾಜು ತಯಾರಿಸಲಾಗಿದೆ. ಸರ್ವೆ ಕಾರ್ಯಗಳಿಗಾಗಿ ರೂ. 42.00 ಲಕ್ಷ ಅನುದಾನ ಒದಗಿಸಿದ್ದು, ಈವರೆಗೆ ರೂ. 19.66 ಲಕ್ಷ ಹಣ ಬಿಡುಗಡೆಯಾಗಿದೆ.

ನೇತ್ರಾವತಿ ತಿರುವು ಯೋಜನೆಯಿಂದ ಕೋಲಾರ ಹಾಗೂ ಚಿಕ್ಕಬಳ್ಳಾಪುರ ಪ್ರದೇಶಗಳಿಗೆ ಕುಡಿಯುವ ನೀರು ಮತ್ತು ಅಂತರ್ಜಲ ಅಭಿವೃದ್ಧಿಗೆ ನೀರು ಬಳಸುವ ಪ್ರಸ್ತಾಪವಿರುತ್ತದೆ. ಇದರ ತನಿಖಾನ್ವೇಷಣೆ ಹಾಗೂ ವರದಿಯ ತಯಾರಿಕೆಯ ವೆಚ್ಚ ರೂ. 14.25 ಕೋಟಿಗಳಾಗಿರುತ್ತದೆ. ಈವರೆಗೆ ರೂ.643.79 ಲಕ್ಷಗಳನ್ನು ಮೆ: ಎನ್.ಆರ್.ಎಸ್.ಸಿ. ಸಂಸ್ಥೆಗೆ ಪಾವತಿ ಮಾಡಲಾಗಿದೆ.

75ಎ–ಬಿ ಪ್ರಕರಣಗಳು

36(151) ಶ್ರೀ ಬಾಲಕೃಷ್ಣ ಹೆಚ್.ಸಿ. (ಮಾಗಡಿ) ಮಾನ್ಯ ಕಂದಾಯ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ರಾಮನಗರ ಜಿಲ್ಲೆಯಲ್ಲಿ ಮತ್ತು ಮಾಗಡಿ ತಾಲ್ಲೂಕಿನಲ್ಲಿ ಕಳೆದ 3 ವರ್ಷಗಳಿಂದ 79 ಎ–ಬಿ ಪ್ರಕರಣಗಳು ಎಷ್ಟು ದಾಖಲಾಗಿದೆ; ಅವುಗಳು ಯಾವುವು; (ವಿವರ ನೀಡುವುದು);

ಆ) ಹಾಗಿದ್ದಲ್ಲಿ ದಾಖಲಾಗಿರುವ ಪ್ರಕರಣಗಳು ಯಾವ ಹಂತದಲ್ಲಿವೆ: ಎಷ್ಟು ಪ್ರಕರಣಗಳು ಇತ್ಯರ್ಥವಾಗಿವೆ; ಬಾಕಿ ಉಳಿದಿರುವ ಪ್ರಕರಣಗಳೆಷ್ಟು; (ಪೂರ್ಣ ಮಾಹಿತಿಗಳನ್ನು ಒದಗಿಸುವುದು)

ಶ್ರೀ ಜಿ. ಕರುಣಾಕರ ರೆಡ್ಡಿ (ಕಂದಾಯ ಸಚಿವರು)

ಅ) ರಾಮನಗರ ಜಿಲ್ಲೆಯಲ್ಲಿ ಒಟ್ಟು 973 ಪ್ರಕರಣಗಳು ದಾಖಲಾಗಿವೆ. (ತಾಲ್ಲೂಕುವಾರು ಪಟ್ಟಿ ಲಗತ್ತಿಸಿದೆ)

ಮಾಗಡಿ ತಾಲ್ಲೂಕಿನಲ್ಲಿ ಕಳೆದ 3 ವರ್ಷಗಳಿಂದ ಒಟ್ಟು 161 ಪ್ರಕರಣಗಳು ದಾಖಲಾಗಿರುತ್ತವೆ. (ಪಟ್ಟಿ ಲಗತ್ತಿಸಿದೆ).